## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ವಿನಾಯಕ ಪ್ಯಾರಾಮೆಡಿಕಲ್ ಇನ್ಸ್‌ಟಿಟ್ಯೂಟ್, ಬೆಂಗಳೂರು ಇವರ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ಒದಗಿಸುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 143 ಎಂಎಂಇ 2003. ದಿನಾಂಕ:18-07-2003.
2. ಸರ್ಕಾರದ ಆದೇಶ ಸಂಖ್ಯೆ:ಆಕುಕ 43 ಎಂಎಂಇ 2007. ದಿನಾಂಕ:21-08-2007.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣಸೇವೆಗಳು ಇವರ ಪತ್ರ ಸಂಖ್ಯೆ: ಎಂಡಿಪಿ(ಕ್ಲಿ)/35/ 2017-18. ದಿನಾಂಕ:18.07.2018

*******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರ ಸರ್ಕಾರಿ ಆದೇಶಗಳಲ್ಲಿ ಶ್ರೀ ವಿನಾಯಕ ಪ್ಯಾರಾಮೆಡಿಕಲ್ ಇನ್ಸ್‌ಟಿಟ್ಯೂಟ್ ಬೆಂಗಳೂರಿನಲ್ಲಿ ಪ್ರಾರಂಭಿಸಲು ಮಾನ್ಯತೆ ನೀಡಿ ಆದೇಶ ಹೊರಡಿಸಲಾಗಿದೆ.

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ಶ್ರೀ ವಿನಾಯಕ ಪ್ಯಾರಾಮೆಡಿಕಲ್ ಇನ್ಸ್‌ಟಿಟ್ಯೂಟ್ ಬೆಂಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿರುವ ಡಿ.ಓ.ಟಿ.ಟಿ, ಡಿ.ಹೆಚ್.ಐ & ಡಿ.ಎಂ.ಎಲ್.ಟಿ ಪ್ಯಾರಾಮೆಡಿಕಲ್ ಕೋರ್ಸ್‌ನ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ಕೆ.ಆರ್.ಪುರಂ, ಬೆಂಗಳೂರು ಇಲ್ಲಿ ಕ್ಲಿನಿಕಲ್ ಸೌಲಭ್ಯವನ್ನು ಒದಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 105 ಪಿಜಿಎಂ 2018,**

**ಬೆಂಗಳೂರು ದಿನಾಂಕ: 26.09.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ವಿನಾಯಕ ಪ್ಯಾರಾಮೆಡಿಕಲ್ ಇನ್ಸ್‌ಟಿಟ್ಯೂಟ್ ಬೆಂಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿರುವ ಡಿ.ಓ.ಟಿ.ಟಿ, ಡಿ.ಹೆಚ್.ಐ & ಡಿ.ಎಂ.ಎಲ್.ಟಿ ಪ್ಯಾರಾಮೆಡಿಕಲ್ ಕೋರ್ಸ್‌ನ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ಕೆ.ಆರ್.ಪುರಂ, ಬೆಂಗಳೂರು ಇಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಕ್ಲಿನಿಕಲ್ ಸೌಲಭ್ಯವನ್ನು ಒದಗಿಸಲು ಸರ್ಕಾರ ಮಂಜೂರಾತಿ ನೀಡಿದೆ.

1) ನೀಡಲಾಗಿರುವ ಕ್ಲಿನಿಕಲ್ ಸೌಲಭ್ಯದ ಅವಧಿಯು ಮೂರು ವರ್ಷಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

26/9/18

2. ಕ್ಲಿನಿಕಲ್ ಸೌಲಭ್ಯ ನೀಡಿದ ಅವಧಿಯಲ್ಲಿ ವಿದ್ಯಾರ್ಥಿಗಳಿಂದ ಸರ್ಕಾರಿ ಆಸ್ಪತ್ರೆಗೆ ನಷ್ಟ ಉಂಟಾದಲ್ಲಿ ಈ ನಷ್ಟವನ್ನು ಸದರಿ ಸಂಸ್ಥೆಯೇ ಭರಿಸತಕ್ಕದ್ದು.

3. ಸದರಿ ಆದೇಶವನ್ನು ಹೊರಡಿಸಿದ ಮೂರು ತಿಂಗಳೊಳಗಾಗಿ ಕ್ಲಿನಿಕಲ್ ಸೌಲಭ್ಯವನ್ನು ಉಪಯೋಗಿಸಿಕೊಳ್ಳದೇ ಹೋದಲ್ಲಿ ಈ ಆದೇಶವನ್ನು ರದ್ದುಗೊಳಿಸಿದೆಯೆಂದು ಭಾವಿಸತಕ್ಕದ್ದು.

4. ಪ್ರಸ್ತುತ ವರ್ಷದಲ್ಲಿ ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ನಿಗದಿತ ಶುಲ್ಕದ ಹಣವನ್ನು ಪೂರ್ಣ ಮತ್ತು ಮುಂಗಡವಾಗಿಯೇ ಪಾವತಿಸಿಗೊಂಡ ನಂತರವೇ ಸಂಸ್ಥೆಯ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ನೀಡತಕ್ಕದ್ದು. ತಪ್ಪಿದ್ದಲ್ಲಿ ಸಂಬಂಧಿಸಿದ ವೈದ್ಯಾಧಿಕಾರಿಗಳು ಹೊಣೆಗಾರರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

28/9/18

(ಹೆಚ್.ಸಿ ಹರ್ಷರಾಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1&2)

ಇವರಿಗೆ:

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-09.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-09.
3. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
4. ಆಡಳಿತ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ಕೆ.ಆರ್.ಪುರಂ, ಬೆಂಗಳೂರು.
5. ಪ್ರಾಂಶುಪಾಲರು, ಶ್ರೀ ವಿನಾಯಕ ಪ್ಯಾರಾಮೆಡಿಕಲ್ ಕಾಲೇಜು, ಶ್ರೀ ರಂಗಧಾಮ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ರಸ್ತೆ, ಕೆ.ಆರ್.ಪುರಂ, ಬೆಂಗಳೂರು-36
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.